**ಕರ್ನಾಟಕ ವಿಧಾನ ಪರಿಷತ್ತು**

**ಶೂನ್ಯ ವೇಳೆ**

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಟಿ.ಎ ಶರವಣ ಇವರು ಶೂನ್ಯ ವೇಳೆಯಲ್ಲಿ ದಿನಾಂಕ 15/07/2024ರಂದು ವಿಜಯ ಕರ್ನಾಟಕ ದಿನಪತ್ರಿಕೆ ಪ್ರಕಟಗೊಂಡಿರುವ ವರದಿಯನ್ನಾಧರಿಸಿ ಇತ್ತೀಚೆಗೆ ರಾಜ್ಯದಲ್ಲಿ ಡೆಂಗ್ಯೂ ಪ್ರಕರಣಗಳು ಉಲ್ಬಣಗೊಳ್ಳುತ್ತಿರುವುದು ಜನರಲ್ಲಿ ಭಯ ಹುಟ್ಟುಸುತ್ತಿದೆ. ಮಳೆಗಾಲದಲ್ಲಿ ಸೊಳ್ಳೆಗಳ ಸಂಖ್ಯೆ ಹೆಚ್ಚುವುದರಿಂದ ಡೆಂಗ್ಯೂ, ಮಲೇರಿಯಾ, ಚಿಕುನ್ ಗುನ್ಯ ರೋಗಗಳು ಜಾಸ್ತಿಯಾಗುತ್ತವೆ. ಈ ರೋಗಗಳ ನಿಯಣಂತ್ರಣಕ್ಕೆ ಪ್ರತಿ ವರ್ಷ ಸರ್ಕಾರ ಕೋಟ್ಯಾಂತರ ರೂಪಾಯಿಗಳನ್ನು ಖರ್ಚು ಮಾಡುತ್ತಿದೆ. ಈ ಸಮೀಕ್ಷೆ ಮಾಡಲು ಪ್ರತಿ ಮಳೆಗಾಲದಲ್ಲಿ ಆರೋಗ್ಯ ಇಲಾಖೆ ಅಧಿಕಾರಿಗಳು ಮತ್ತು ಆಶಾ ಕಾರ್ಯಕರ್ತೆಯರನ್ನೊಳಗೊಂಡ ತಂಡ ರಚಿಸಿ ಸಮೀಕ್ಷೆ ನಡೆಸಲಾಗುತ್ತದೆ. ಈ ಸಂಬಂಧ ನಗರ ಪ್ರದೇಶಗಳಲ್ಲಿ ಪ್ರತಿ ತಿಂಗಳ ಮೊದಲ ಮತ್ತು ಮೂರನೇ ಶುಕ್ರವಾರ ಆರೋಗ್ಯ ನಿರೀಕ್ಷಣಾಧಿಕಾರಿಗಳು (HIO) ಮತ್ತು ಆರೋಗ್ಯ ಸುರಕ್ಷತಾಧಿಕಾರಿಗಳು (PHCO) ಲಾರ್ವಾ ಸಮೀಕ್ಷೆ ನಡೆಸುತ್ತಾರೆ. ಮನೆಮನೆಗೆ ತೆರಳಿ ಸಮೀಕ್ಷೆ ಮಾಡಿ ಸೊಳ್ಳೆಗಳ ಉತ್ಪತ್ತಿ ತಾಣಗಳನ್ನು ನಾಶ ಪಡಿಸುವುದು ಈ ಸಮೀಕ್ಷೆಯ ಮೂಲ ಉದ್ದೇಶ. ಇವರಿಗೆ ಒಂದು ದಿನಕ್ಕೆ ತಲಾ ತಿಂಗಳಿಗೆ ರೂ 300/- ರೂಗಳನ್ನು ಕೊಡಲಾಗುತ್ತಿದೆ ಎಂದು ಹೇಳಿಕೊಳ್ಳುತ್ತಿರುವ ಆರೋಗ್ಯ ಇಲಾಖೆಯ ಅಧಿಕಾರಿಗಳು ಜಿ.ಪಿ.ಎಸ್ ಇಲ್ಲದ ಹಳೆಯ ಫೋಟೋಗಳನ್ನು ತೋರಿಸಿ, ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿಗಳನ್ನು ಮೋಸ ಮಾಡುತ್ತಿದ್ದಾರೆ. ಉದಾಹರಣೆಗೆ-ಕಳೆದ ವರ್ಷ ಹಾವೇರಿ ಜಿಲ್ಲೆಯಲ್ಲಿ 9,37,150/- ರೂಗಳನ್ನು ಖರ್ಚು ಮಾಡಲಾಗಿದೆ. ಅದರಂತೆ, ನಗರ ಪ್ರದೇಶದಲ್ಲಿ ಆಶಾ ಕಾರ್ಯಕರ್ತೆಯರಿಗೆ ಪ್ರತಿ ತಿಂಗಳಿಗೆ 200/- ರೂಗಳನ್ನು ನೀಡಲಾಗುತ್ತಿದೆ. ಕಳೆದ ವರ್ಷ 2,27,400/-ಗಳನ್ನು ಖರ್ಚು ಮಾಡಲಾಗಿದೆ. ಇದು ನಾಗರೀಕರ ಆರೋಗ್ಯದ ಜೊತೆ ಚೆಲ್ಲಾಟ ನಡೆಸಿದಂತಲ್ಲವೇ, ಇಂತಹ ತಪ್ಪುಗಳು ಪುನರಾವರ್ತಿಸದಂತೆ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಬೇಕು ಹಾಗೂ ತಪ್ಪಗಳು ಪುನರಾವರ್ತಿಸಿದಲ್ಲಿ ಅಂತಹ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳುವ ಕುರಿತು:-

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಉತ್ತರ:-**

ಡೆಂಗ್ಯೂ ಜ್ವರವು ವೈರಸ್ ನಿಂದ ಉಂಟಾಗುವ ಖಾಯಿಲೆಯಾಗಿದ್ದು, ಸೋಂಕಿತ ಈಡಿಸ್ ಈಜಿಪ್ಟೈ ಎಂಬ ಸೊಳ್ಳೆ ಕಚ್ಚುವಿಕೆಯಿಂದ ಈ ಖಾಯಿಲೆಯು ಹರಡುತ್ತದೆ. ಹಗಲು ಹೊತ್ತಿನಲ್ಲಿ ಹೆಚ್ಚಾಗಿ ಕಚ್ಚುವ ಈಡಿಸ್ ಸೊಳ್ಳೆಯು, ಗೃಹೋಪಯೋಗಕ್ಕಾಗಿ ಮನೆಗಳಲ್ಲಿ ಶೇಖರಿಸುವ ಸಿಮೆಂಟ್ ತೊಟ್ಟಿ, ಡ್ರಂ, ಬ್ಯಾರಲ್, ನ ನೀರಿನಲ್ಲಿ ಹಾಗೂ ಹೂ ಕುಂಡಗಳಲ್ಲಿ ಶೇಖರಣೆಯಾಗುವ ನೀರಿನಲ್ಲಿ, ರೆಫ್ರಿಜರೇಟರ್ ತಳಭಾಗದಲ್ಲಿ ಶೇಖರಣೆಯಾಗುವ ನೀರಿನಲ್ಲಿ ಹಾಗೂ ಹೊರಾಂಗಣದಲ್ಲಿ ಬಿಸಾಡಿದ ಅನುಪಯುಕ್ತ ವಸ್ತುಗಳಾದ ಟೈರು, ಪ್ಲಾಸ್ಟಿಕ್ ಗ್ಲಾಸ್/ಕಪ್ಪು, ತೆಂಗಿನ ಚಿಪ್ಪು, ಇತ್ಯಾದಿಗಳಲ್ಲಿ ಸಂಗ್ರಹವಾಗುವ ಮಳೆಯ ನೀರಿನಲ್ಲಿ ಈಡಿಸ್ ಸೊಳ್ಳೆಗಳು ಬೆಳೆಯುತ್ತವೆ.

ಮುಂಗಾರು ಪೂರ್ವ, ಮುಂಗಾರು ಹಾಗೂ ಮುಂಗಾರಿನ ನಂತರದ ದಿನಗಳಲ್ಲಿ ಡೆಂಗ್ಯೂ ಜ್ವರ ಪ್ರಸರಣವು ಅಧಿಕವಾಗುವ ಹಿನ್ನೆಲೆಯಲ್ಲಿ, ಡೆಂಗಿ ಜ್ವರ ಪ್ರಸರಣನ್ನು ನಿಯಂತ್ರಿಸಲು ವರ್ಷದ ಎಲ್ಲಾ ತಿಂಗಳುಗಳಲ್ಲೂ, ಗ್ರಾಮೀಣ ಪ್ರದೇಶದಲ್ಲಿ ಆಶಾ ಹಾಗೂ ಆರೋಗ್ಯ ಸಿಬ್ಬಂದಿ ಈಡಿಸ್ ಲಾರ್ವಾ ಸಮೀಕ್ಷೆಯನ್ನು ನಡೆಸುತ್ತಾರೆ.

ಮುಂದುವರೆದು, ನಗರ ಹಾಗೂ ಪಟ್ಟಣ ಪ್ರದೇಶಗಳಲ್ಲಿ ಡೆಂಗಿ ಜ್ವರ ನಿಯಂತ್ರಣ ಹಾಗೂ ಈಡಿಸ್ ಲಾರ್ವಾ ಚಟುವಟಿಕೆಯ ಜವಾಬ್ದಾರಿಯು ಸ್ಥಳೀಯ ಸಂಸ್ಥೆಗಳದ್ದಾಗಿದೆ. ಆದರೆ, ನಗರ / ಪಟ್ಟಣ ಪ್ರದೇಶಗಳಲ್ಲಿ ಆರೋಗ್ಯ ಸಹಾಯಕರ ಕೊರತೆಯಿಂದಾಗಿ, ಈಡಿಸ್ ಲಾರ್ವಾ ನಿರ್ಮೂಲನಾ ಚಟುವಟಿಕೆಯು ಕುಂಠಿತಗೊಂಡು , ಡೆಂಗ್ಯೂ ಪ್ರಕರಣಗಳಲ್ಲಿ ಏರಿಕೆಯಾಗುವ ಸಂಭವವಿರುತ್ತದೆ.

ಈ ಹಿನ್ನೆಲೆಯಲ್ಲಿ, ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ 2017ನೇ ಸಾಲಿನಿಂದಲೇ ಪ್ರತಿ ತಿಂಗಳ ಮೊದಲನೇ ಹಾಗೂ ಮೂರನೇ ಶುಕ್ರವಾರ, ಆರೋಗ್ಯ ಸಿಬ್ಬಂದಿಗಳನ್ನು 50,000 ಹಾಗೂ ಅದಕ್ಕಿಂತ ಹೆಚ್ಚು ಜನಸಂಖ್ಯೆ ಇರುವ ನಗರ / ಪಟ್ಟಣ ಪ್ರದೇಶಗಳಿಗೆ ಆರೋಗ್ಯ ಸಿಬ್ಬಂದಿಯನ್ನು ನಿಯೋಜಿಸಿ ಈಡಿಸ್ ಲಾರ್ವಾ ಸಮೀಕ್ಷೆಯನ್ನು ನಡೆಸಲಾಗುತ್ತಿದೆ.

ಸದರಿ ಚಟುವಟಿಕೆಯು ಕ್ರಮಬದ್ಧವಾದ ಮೈಕ್ರೋಪ್ಲಾನ್ ನಂತೆ ನಡೆಯುತ್ತಲಿದ್ದು, ಸಮೀಕ್ಷೆಯ ವಿವರಗಳನ್ನು ವರದಿ ಮಾಡಲಾಗುತ್ತದೆ. ನಗರ / ಪಟ್ಟಣ ಪ್ರದೇಶದ ವ್ಯಾಪ್ತಿಯು ವಿಸ್ತಾರವಾಗಿರುವ ಹಿನ್ನಲೆಯಲ್ಲಿ, ಡೆಂಗ್ಯೂ ಸಮಸ್ಯಾತ್ಮಕ ವಾರ್ಡಗಳು, ಸ್ಲಂ ಗಳಲ್ಲಿ ಈ ಚಟುವಟಿಕೆಯನ್ನು ಆದ್ಯತೆಯ ಮೇಲೆ ನಡೆಸಲಾಗುತ್ತಿದೆ.

ಈಡಿಸ್ ಲಾರ್ವಾ ಸರ್ವೇಕ್ಷಣೆಯ ಸಂದರ್ಭದಲ್ಲಿ, ನಿಯೋಜಿತ ಆರೋಗ್ಯ ಸಿಬ್ಬಂದಿಯು ಲಾರ್ವಾ ನಿರ್ಮೂಲನೆಯ ಜೊತೆಗೆ, ಟೆಮಿಫಾಸ್ ದ್ರಾವಣವನ್ನು ಬೆರೆಸುವುದು, ಜ್ವರ ಸಮೀಕ್ಷೆ ನಡೆಸುವುದು, ಶಂಕಿತ ಡೆಂಗಿ ಜ್ವರ ಪ್ರಕರಣಗಳಿದ್ದಲ್ಲಿ, ಆಸ್ಪತ್ರೆಗೆ ತೆರಳುವಂತೆ ಸೂಚಿಸುವುದು ಹಾಗೂ ಡೆಂಗ್ಯೂ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಆರೋಗ್ಯ ಶಿಕ್ಷಣವನ್ನು ನೀಡುತ್ತಿದ್ದಾರೆ.

ಪ್ರತಿ ತಿಂಗಳ 1ನೇ ಹಾಗೂ 3ನೇ ಶುಕ್ರವಾರದ ಸಮೀಕ್ಷೆಯಲ್ಲಿ ಪಾಲ್ಗೊಂಡವರಿಗೇ ಮಾತ್ರವೇ NHM-NVBDCP ಅಡಿಯಲ್ಲಿ ನಿಯಮಾನುಸಾರ ರೂ.300/-ಗಳ ಗೌರವಧನವನ್ನು ಪಾವತಿಸಲಾಗುತ್ತಿದೆ.

ಗ್ರಾಮೀಣ ಪ್ರದೇಶದ ಆರೋಗ್ಯ ಸಿಬ್ಬಂದಿಯು ತಮ್ಮ ಕ್ಷೇತ್ರ ವ್ಯಾಪ್ತಿಯಿಂದ ಹೊರಗಿನ ಪ್ರದೇಶಕ್ಕೆ ನಿಯೋಜನೆಗೊಂಡು, ಚಟುವಟಿಕೆಯನ್ನು ನಡೆಸುವುದರಿಂದ, ಗುಣಾತ್ಮಕವಾಗಿ ಕೈಗೊಳ್ಳಲು ಪ್ರೇರೇಪಿಸುವ ನಿಟ್ಟಿನಲ್ಲಿ ಗೌರವಧನವನ್ನು ನಿಯಮಾನುಸಾರ ಪಾವತಿಸಲಾಗುತ್ತಿದೆ.

ಲಾರ್ವಾ ಸಮೀಕ್ಷೆಯಲ್ಲಿ ಹೆಚ್ಚು ಲಾರ್ವಾ ಕಂಡು ಬಂದ ವಾರ್ಡ್ ಗಳಲ್ಲಿ ನಿಯಂತ್ರಣ ಕ್ರಮಗಳನ್ನು ತೀವ್ರಗೊಳಿಸಲಾಗುತ್ತಿದೆ. ರಾಜ್ಯ ಮಟ್ಟಕ್ಕೆ ಸಲ್ಲಿಕೆಯಾಗುವ ಲಾರ್ವಾ ಸಮೀಕ್ಷೆಯ ಕ್ರೂಢೀಕೃತ ವರದಿಯ ಅಗತ್ಯ ಸಲಹೆ – ಸೂಚನೆಗಳನ್ನು ನೀಡಲಾಗುತ್ತಿದೆ.

ನಗರ / ಪಟ್ಟಣ ಪ್ರದೇಶದಲ್ಲಿ ನಡೆಯುವ ಈ ಚಟುವಟಿಕೆಯನ್ನು ಜಿಲ್ಲಾ ಹಾಗೂ ತಾಲ್ಲೂಕು ತಂಡಗಳು Cross check ಮಾಡಿ, ಗುಣಾತ್ಮಕ ಸಮೀಕ್ಷೆಯನ್ನು ಖಚಿತಪಡಿಸಿಕೊಳ್ಳಲಾಗುತ್ತಿದೆ. ಈ ಎಲ್ಲಾ ಅಂಶಗಳ ಹಿನ್ನಲೆಯಲ್ಲಿ, ಪೂರಕ ದಾಖಲೆಯಾಗಿ GPS ಫೋಟೋಗಳನ್ನು ಸಲ್ಲಿಸುವಂತೆ ಸೂಚಿಸಿದ್ದು, ಇದರಿಂದ ಚಟುವಟಿಕೆಯ ಅನುಷ್ಠಾನವನ್ನು ಖಾತ್ರಿಪಡಿಸಿಕೊಳ್ಳಲಾಗುತ್ತಿದೆ.

ಈ ಎಲ್ಲಾ ಕ್ರಮಗಳ ಸಮೀಕ್ಷೆಯು ಗುಣಾತ್ಮಕವಾಗಿ ನಡೆಯುವ ನಿಟ್ಟಿನಲ್ಲಿ ಮೇಲ್ವಿಚಾರಣೆ ನಡೆಸಲು ಜಿಲ್ಲಾ ಕಾರ್ಯಕ್ರಮಾಧಿಕಾರಿಗಳಿಗೆ ಕಾಲ-ಕಾಲಕ್ಕೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿ, ಮಾರ್ಗಸೂಚಿಯ ಪಾಲಿಸಲು ವಿಫಲರಾದವರಿಗೆ ಸೂಕ್ತ ಸಮಜಾಯಿಸಿ ನೀಡುವಂತೆ, ಕಾರಣ ಕೇಳಿ ನೋಟಿಸ್ ಸಹ ಜಾರಿಗೊಳಿಸಲಾಗುತ್ತಿದೆ.

ಒಟ್ಟಾರೆಯಾಗಿ ಡೆಂಗ್ಯೂ ನಿಯಂತ್ರಣದ ನಿಟ್ಟಿನಲ್ಲಿ ಲಾರ್ವಾ ನಿರ್ಮೂಲನೆಯನ್ನು ಆದ್ಯತೆಯಾಗಿ ಪರಿಗಣಿಸಿ ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ಫಲಿತಾಂಶ ಆಧಾರಿತ ಚಟುವಟಿಕೆಯನ್ನು ಸಮರೋಪಾದಿಯಲ್ಲಿ ಕೈಗೊಳ್ಳಲಾಗುತ್ತಿದೆ.

ಮುಂದುವರೆದು, ಈ ಸಮೀಕ್ಷಾ ಕಾರ್ಯಕ್ರಮದಲ್ಲಿ ಸಿಬ್ಬಂದಿಗಳ ಇನ್ನು ಹೆಚ್ಚು ಹೊಣೆಗಾರಿಕೆ ತರಲು ಜಿಪಿಎಸ್ ಆಧಾರಿತ ಮೊಬೈಲ್ ಆಪ್‌ನ್ನು ಅಭಿವೃದ್ಧಿಪಡಿಸಲು ಕ್ರಮಕೈಗೊಳ್ಳಲಾಗುವುದು.

**ಆಕುಕ 87 ಎಸ್ಎಂಎಂ 2024**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**